ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಗುಂಡ್ಲುಪೇಟೆ ನಗರದ ರಸ್ತೆಗಳನ್ನು ದುರಸ್ಥಿ ಮಾಡುವ ಕುರಿತು

ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-

1100 (1267) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ನಗರದ ಪ್ರಮುಖ ರಸ್ತೆಗಳಾದ ಕಿತ್ತೂರು ರಾಣಿ ಚೆನ್ನಮ್ಮ ರಸ್ತೆ, ದೇವರಾಜು ಅರಸು ರಸ್ತೆಗಳು ಹಾಳಾಗಿ, ಸಾರ್ವಜನಿಕ ಸಂಚಾರಕ್ಕೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರಸ್ತೆಗಳನ್ನು ದುರಸ್ಥಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೆ ;

(ಆ) ಗುಂಡ್ಲುಪೇಟೆ ನಗರದಲ್ಲಿ ಒಳಚರಂಡಿ ಕಾಮಗಾರಿಗೆ ರಸ್ತೆಗಳನ್ನು ಅಗೆದಿದ್ದು, ಎಲ್ಲೆಲ್ಲಿ ಒಳಚರಂಡಿ ಕಾಮಗಾರಿ ಮುಗಿದಿದೆ ; ಅಲ್ಲಿ ರಸ್ತೆಗಳನ್ನು ದುರಸ್ಥಿ ಮಾಡಿ ಡಾಂಬರು ಹಾಕಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೆ ?